# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೧ | ಬೆಂಗಳೂರು, **ಶುಕ್ರವಾರ,** ೧೨ ಸೆಪ್ಟೆಂಬರ್, ೨೦೨೫ (**ಭಾದ್ರಪದ** ೨೧, ಶಕವರ್ಷ ೧೯೪೭) | ಸಂ. ೫೯೨ |
|---|---|---|
| **Part – I** | **BENGALURU, FRIDAY, 12 SEPTEMBER, 2025 (BHADRAPADA 21, SHAKAVARSHA 1947)** | **No. 592** |


## ಕರ್ನಾಟಕ ಸರ್ಕಾರದ ನಡೆವಳಿಗಳು

**ವಿಷಯ:** ರಾಜ್ಯದ ಎಲ್ಲಾ ಸರ್ಕಾರಿ ಇಲಾಖೆ/ನಿಗಮ/ಮಂಡಳಿ/ನಗರಸಭೆ/ ಸರ್ಕಾರದ ಇತರೆ ಅಧೀನ ಸಂಸ್ಥೆಗಳಿಗೆ ಸೇರಿದ, ನೋಂದಣಿಯಾಗಿ 15 ವರ್ಷಗಳನ್ನು ಮೀರಿದ ವಾಹನಗಳನ್ನು ಕಡ್ಡಾಯವಾಗಿ ರಾಜ್ಯದಲ್ಲಿ ಸ್ಥಾಪಿತವಾಗಿರುವ ನೋಂದಾಯಿತ RVSF ಕೇಂದ್ರಗಳಲ್ಲಿಯೇ ನಾಶಪಡಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಟಿಡಿ 191 ಟಿಡಿಒ 2022, ದಿನಾಂಕ 30.12.2022
2. ಸರ್ಕಾರದ ಆದೇಶ ಸಂಖ್ಯೆ:ಟಿಡಿ 191 ಟಿಡಿಒ 2022, ದಿನಾಂಕ 26.09.2023
3. ಹಣಕಾಸು ಮಂತ್ರಾಲಯದ ಪತ್ರ ಸಂಖ್ಯೆ: F.No. 44(1) PF-S/2025-26 (CAPEX), ದಿನಾಂಕ:22.05.2025
4. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂ. ಆಇ 418 ವೆಚ್ಚ-11 2022, ದಿನಾಂಕ:19.08.2025

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳ ಅನ್ವಯ ಮೋಟಾರು ವಾಹನಗಳ ಕಾಯ್ದೆ 1988ರ ಕಲಂ 64(ಪಿ)ರಲ್ಲಿ ಪ್ರದತ್ತವಾದ ಅಧಿಕಾರದಡಿ ರಾಜ್ಯದಲ್ಲಿ Registered Vehicle Scrapping Policy of Karnataka – 2022ನ್ನು ಜಾರಿಗೊಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಸರ್ಕಾರದ ಆದೇಶದಲ್ಲಿ, Registered Vehicle Scrapping Policy - 2022ನ್ನು ಜಾರಿಗೊಳಿಸಲು 15 ವರ್ಷಗಳನ್ನು ಪೂರೈಸಿರುವ, ರಾಜ್ಯ ಸರ್ಕಾರ/ಕೇಂದ್ರ ಸರ್ಕಾರ/ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳು/ನಿಗಮಗಳು/ಮಂಡಳಿಗಳು/ ಸ್ಥಳೀಯ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಸಂಸ್ಥೆ/ಇತ್ಯಾದಿಗಳಲ್ಲಿರುವ 5000 ವಾಹನಗಳನ್ನು ಆದ್ಯತೆ ಮತ್ತು ಉಪಯೋಗದ ಆಧಾರದ ಮೇಲೆ ಹಂತಹಂತವಾಗಿ ನಾಶಪಡಿಸಲು ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3)ರ ಭಾರತ ಸರ್ಕಾರದ ಹಣಕಾಸು ಮಂತ್ರಾಲಯದ ಪತ್ರದಲ್ಲಿ Scheme Guidelines for reform–based parts of the 'Scheme for Special Assistance to States for Capital Investment 2025-26ರ ಅನುಸಾರ ಪ್ರೋತ್ಸಾಹ ಧನ ಬಿಡುಗಡೆ ಮಾಡಲು 15 ವರ್ಷಗಳು ಮೀರಿದ ಎಲ್ಲಾ ಸರ್ಕಾರಿ ವಾಹನಗಳನ್ನು RVSF ಗಳಲ್ಲೆ ನಾಶಪಡಿಸಲು ಗುರಿ ನಿಗದಿಪಡಿಸಲಾಗಿರುವುದರಿಂದ ಇನ್ನು ಮುಂದೆ 15 ವರ್ಷಗಳು ಮೀರಿದ ಎಲ್ಲಾ ಸರ್ಕಾರಿ ವಾಹನಗಳನ್ನು ಖಾಸಗಿ ಕೇಂದ್ರಗಳಲ್ಲಿ ನಾಶಪಡಿಸದೇ ಕಡ್ಡಾಯವಾಗಿ ನಿಗದಿತ RVSFಗಳಲ್ಲೆ ನಾಶಪಡಿಸಲು ಸೂಕ್ತ ಕ್ರಮ ವಹಿಸುವಂತೆ ತಿಳಿಸಿದೆ.

ಈ ಹಿನ್ನೆಲೆಯಲ್ಲಿ, ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಟಿಡಿ 97 ಟಿಡಿಒ 2023,</u>**
**<u>ಬೆಂಗಳೂರು, ದಿನಾಂಕ :12.09.2025</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ಸರ್ಕಾರಿ ಇಲಾಖೆ/ ನಿಗಮ/ ಮಂಡಳಿ/ ನಗರಸಭೆ/ ಸರ್ಕಾರದ ಇತರೆ ಅಧೀನ ಸಂಸ್ಥೆಗಳಿಗೆ ಸೇರಿದ, ನೋಂದಣಿಯಾಗಿ 15 ವರ್ಷಗಳನ್ನು ಮೀರಿದ ವಾಹನಗಳನ್ನು ಕಡ್ಡಾಯವಾಗಿ ರಾಜ್ಯದಲ್ಲಿ ಸ್ಥಾಪಿತವಾಗಿರುವ ನೋಂದಾಯಿತ RVSF ಕೇಂದ್ರಗಳಲ್ಲಿಯೇ ನಾಶಪಡಿಸಲು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂ. ಆಇ 418 ವೆಚ್ಚ-11/2022 (E), ದಿನಾಂಕ:08.09.2025ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪುಷ್ಪ ವಿ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH
Digitally signed by THAMMAIAH
DN: c=IN, o=Centre for e-Governance, 2.5.4.20=be54f34f4e31eae50203ca7fab5ceb3794f20a8460a2582ef28294d43b8f8b16, ou=department of printing stationery and Publication,CID - 7048443, postalCode=560001, st=Karnataka, serialNumber=4d9b284dcc53d39f1425f50485de07dd86efa302a3fce3729eddea0c1b5098e0, cn=THAMMAIAH
Date: 2025.09.15 18:07:20 +05'30'